ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

## ಪತ್ರಿಕಾ ತುಣುಕುಗಳು
## PAPER CLIPPINGS

2

ಇಲಾಖೆ / ವಿಷಯ : DEPARTMENT / SUBJECT:

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯವಾಣಿ        ದಿನಾಂಕ : DATE : 4-10-20

# ಸಚಿವ ಸ್ಥಾನಕ್ಕೆ ಸಿ.ಟಿ. ರವಿ ರಾಜೀನಾಮೆ

4/10/20



**ಬೆಂಗಳೂರು:** ಬಿಜೆಪಿ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿಯಾಗಿ ನೇಮಕವಾಗಿರುವ ಸಿ.ಟಿ.ರವಿ ಸಚಿವ ಸ್ಥಾನಕ್ಕೆ ಶನಿವಾರ ರಾಜೀನಾಮೆ ಸಲ್ಲಿಸಿದ್ದಾರೆ. ಆದರೆ ಇನ್ನೂ ಅಂಗೀಕಾರ ವಾಗಿಲ್ಲ. ಪ್ರಧಾನ ಕಾರ್ಯದರ್ಶಿಯಾಗಿ ನೇಮಕವಾದ ದಿನವೇ ಗಾಂಧೀ ಜಯಂತಿ ಮುಗಿದ ಬಳಿಕ ರಾಜೀನಾಮೆ ನೀಡುವುದಾಗಿ ಅವರು ಹೇಳಿದ್ದರು. ಶನಿವಾರ ಬೆಳಗ್ಗೆ ಸಿಎಂ ಯಡಿಯೂರಪ್ಪ ಅವರನ್ನು ಭೇಟಿ ಮಾಡಿದ ರವಿ ಚಿಕ್ಕಮಗಳೂರು ಜಿಲ್ಲೆಯಲ್ಲಿ ಕೈಗೊಂಡಿರುವ ಪ್ರಗತಿಯ ವರದಿ ಹಾಗೂ ಇನ್ನೂ ಬಾಕಿ ಉಳಿದಿರುವ ಕೆಲಸಗಳ ವಿವರಗಳನ್ನು ಒಳಗೊಂಡ ಪುಸ್ತಕದ ಜತೆಗೆ ರಾಜೀನಾಮೆ ಸಹ ಸಲ್ಲಿಸಿದರು. ಆದರೆ ರಾಜೀನಾಮೆಯನ್ನು ಅಂಗೀಕರಿಸದ ಯಡಿಯೂರಪ್ಪ, ದಸರಾ, ಕನ್ನಡ ರಾಜ್ಯೋತ್ಸವ ಕಾರ್ಯಕ್ರಮಗಳು ಮುಗಿಯುವ ತನಕ ಮುಂದುವರಿಯುವಂತೆ ಸೂಚನೆ ನೀಡಿದರೆನ್ನಲಾಗಿದೆ. ಅ.5-6ರಂದು ದೆಹಲಿಯಲ್ಲಿ ಬಿಜೆಪಿಯ ನೂತನ ಪದಾಧಿಕಾರಿಗಳ ಸಭೆ ನಡೆಯಲಿದೆ. ಸಭೆ ಮುಗಿದ ನಂತರ ವರಿಷ್ಠರಿಂದ ಬರುವ ಸೂಚನೆಯನ್ನಾಧರಿಸಿ ರವಿ ರಾಜೀನಾಮೆಯ ಅಂಗೀಕಾರದ ಬಗ್ಗೆ ಸಿಎಂ ತೀರ್ಮಾನ ತೆಗೆದು ಕೊಳ್ಳಲಿದ್ದಾರೆ.